# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ: ತುವಿ:ಶೈವಿ:2024-25:/888 ದಿನಾಂಕ: 21.05.2024

## ಸುತ್ತೋಲೆ

ವಿಷಯ : ಯುಕ್ತ ಕೌಶಲ್ಯ ತರಬೇತಿ ಕೇಂದ್ರದ ವತಿಯಿಂದ ಆಯೋಜಿಸಿರುವ "ಕೌಶಲ್ಯ ಪಥ" **MSYEP** ತರಬೇತಿ ಕಾರ್ಯಕ್ರಮದ ಬಗ್ಗೆ.

ಉಲ್ಲೇಖ : ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:20.05.2024.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯ ಹಾಗೂ ಯುಕ್ತ ಕೌಶಲ್ಯ ತರಬೇತಿ ಕೇಂದ್ರದ ವತಿಯಿಂದ **"ಕೌಶಲ್ಯ ಪಥ" MSYEP** (Multi Skills Youth Empowerment Program) ವಿವಿಧ ಕೌಶಲ್ಯಗಳ ಯುವ ಸಬಲೀಕರಣ ತರಬೇತಿ ಕಾರ್ಯಕ್ರಮವನ್ನು ನಡೆಸಲು ಉದ್ದೇಶಿಸಲಾಗಿದೆ. ಸದರಿ ಕಾರ್ಯಕ್ರಮದಲ್ಲಿ **ಕಂಪ್ಯೂಟರ್, ಸ್ಪೋಕನ್ ಇಂಗ್ಲೀಷ್, ವ್ಯಕ್ತಿತ್ವ ವಿಕಸನ, ಜೀವನ ಕೌಶಲ್ಯ, ವೃತ್ತಿಪರ ತರಬೇತಿಗಳನ್ನು** ತುಮಕೂರು ವಿಶ್ವವಿದ್ಯಾನಿಲಯದ ಎಲ್ಲಾ ಘಟಕ ಮತ್ತು ಸಂಯೋಜಿತ ಕಾಲೇಜುಗಳಲ್ಲಿ ವ್ಯಾಸಾಂಗ ಮಾಡುತ್ತಿರುವ 3 ಮತ್ತು 4ನೇ ಸೆಮಿಸ್ಟರ್‌ನಲ್ಲಿ ವಿದ್ಯಾರ್ಥಿಗಳನ್ನು **MSYEP Entrance Test WEBSITE:- https://yukthakaushalyakar.in/ or QR Code** ಮೂಲಕ ನೋಂದಣಿ ಮಾಡಿಕೊಂಡು ತರಬೇತಿಗಳ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದೆ. ಅಲ್ಲದೆ ಯುಕ್ತ ಕೌಶಲ್ಯ ತರಬೇತಿ ಕೇಂದ್ರದವತಿಯಿಂದ ನಿಯೋಜಿಸಿರುವ ಸಂಪನ್ಮೂಲ ವ್ಯಕ್ತಿಗಳೊಡನೆ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ, ಸ್ಪರ್ಧಾತ್ಮಕ ಪರೀಕ್ಷೆ, ಉದ್ಯೋಗ, ಸ್ವಯಂ ಉದ್ಯೋಗ ಹಾಗೂ ಸರ್ಕಾರಿ ಇಲಾಖೆಗಳ ಸವಲತ್ತುಗಳ ಬಗ್ಗೆ ಮಾಹಿತಿಯನ್ನು ನೀಡಲು ವಾರದಲ್ಲಿ ಒಮ್ಮೆ ಸಂವಾದ ಚಟುವಟಿಕೆಗಳನ್ನು ಆಯೋಜಿಸಲು "ಕೌಶಲ್ಯ ಪಥ" ಸಂಯೋಜಕರನ್ನು ನೇಮಿಸಲು ಕ್ರಮವಹಿಸುವಂತೆ ಈ ಮೂಲಕ ತಿಳಿಸಿದೆ.

ಆದೇಶದ ಮೇರೆಗೆ,
D-Sanneh 21/05/2024
ಉಪಕುಲಸಚಿವರು
ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾಲಯ

ಗೆ,

ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಮತ್ತು ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಕೇಂದ್ರ ಮುಖ್ಯ ಕಾರ್ಯಕ್ರಮ ಆಯೋಜಕರು, ಯುಕ್ತ ಕೌಶಲ್ಯ ತರಬೇತಿ ಕೇಂದ್ರ, ಮಧುಗಿರಿ, ತುಮಕೂರು
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ಎಲ್ಲಾ ಕಾಲೇಜುಗಳಿಗೂ ಈ-ಮೇಲ್ ಮೂಲಕ ಕಳುಹಿಸುವುದು ಹಾಗೂ ವಿ.ವಿ. ಜಾಲತಾಣದಲ್ಲಿ ಪ್ರಕಟಿಸುವುದು.
4. ಕಚೇರಿ ಪ್ರತಿ.